# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ ಸದಸ್ಯರ ಹೆಸರು: | ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 2247 |
| ಉತ್ತರಿಸಬೇಕಾದ ದಿನಾಂಕ: | 21-03-2022 |
| ಉತ್ತರಿಸುವ ಸಚಿವರು: | ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉಕ್ರೇನ್ ದೇಶದಲ್ಲಿ ವೈದ್ಯಕೀಯ ವಿದ್ಯಾಭ್ಯಾಸ ಮಾಡುತ್ತಿದ್ದ ನಮ್ಮ ರಾಜ್ಯದ ವಿದ್ಯಾರ್ಥಿಗಳು ಯುದ್ಧದ ಕಾರಣ ರಾಜ್ಯಕ್ಕೆ ಮರಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಉಕ್ರೇನ್ ದೇಶದಲ್ಲಿ ವೈದ್ಯಕೀಯ ವಿದ್ಯಾಭ್ಯಾಸ ಮಾಡುತ್ತಿದ್ದ ನಮ್ಮ ರಾಜ್ಯದ ವಿದ್ಯಾರ್ಥಿಗಳು ಯುದ್ಧದ ಕಾರಣ ಮರಳಿರುವುದು ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಈ ವಿದ್ಯಾರ್ಥಿಗಳಿಗೆ ರಾಜ್ಯದಲ್ಲೇ ವೈದ್ಯಕೀಯ ಶಿಕ್ಷಣ ಪಡೆಯಲು ಅವಕಾಶ ಮಾಡಿಕೊಡಲು ವಿಶೇಷ ನಿಯಮಾವಳಿಗಳನ್ನು ರೂಪಿಸಲು ಸರ್ಕಾರ ಕ್ರಮವಹಿಸುವುದೇ? (ವಿವರ ನೀಡುವುದು) | ರಾಷ್ಟ್ರೀಯ ವೈದ್ಯಕೀಯ ಪರಿಷತ್ತು ನಮ್ಮ ರಾಷ್ಟ್ರದಲ್ಲಿ ವೈದ್ಯಕೀಯ ಶಿಕ್ಷಣ ನೀತಿಯನ್ನು ರೂಪಿಸುವ ಅಗ್ರಮಾನ್ಯ ಶಾಸನಬದ್ಧ ಸಂಸ್ಥೆಯಾಗಿರುತ್ತದೆ. ಪ್ರಸ್ತುತ ಹೊರದೇಶದಲ್ಲಿ ವೈದ್ಯಕೀಯ ಶಿಕ್ಷಣವನ್ನು ಪಡೆದ ವಿದ್ಯಾರ್ಥಿಗಳು ನಮ್ಮ ದೇಶದಲ್ಲಿ ವೈದ್ಯಕೀಯ ಸೇವೆಯನ್ನು ಇಚ್ಚಿಸಿದ್ದಲ್ಲಿ Foreign Medical Graduates Examination (FMGE) ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಾಗಿರುತ್ತದೆ. ಸದ್ಯಕ್ಕೆ ಈ ಪರೀಕ್ಷೆಯಲ್ಲಿ ಯಾವುದೇ ವಿನಾಯಿತಿ ನೀಡಲಾಗಿರುವುದಿಲ್ಲ. ಉಕ್ರೇನ್ ದೇಶದಲ್ಲಿ ವೈದ್ಯಕೀಯ ವಿದ್ಯಾಭ್ಯಾಸ ಮಾಡುತ್ತಿದ್ದ ವಿದ್ಯಾರ್ಥಿಗಳು ಯುದ್ಧದ ಕಾರಣದಿಂದ ರಾಜ್ಯಕ್ಕೆ ಮರಳಿದ್ದಾರೆ. ಇದೊಂದು ವಿಶೇಷ ಸಂದರ್ಭವಾಗಿದ್ದು, ಈ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರವು ಅವಶ್ಯಕ ಕ್ರಮ ಕೈಗೊಳ್ಳುವ ಬಗ್ಗೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಹಾಗೂ ಕ್ಷೇತ್ರ ಪರಿಣಿತರೊಂದಿಗೆ ಚರ್ಚಿಸಿ ರಾಷ್ಟ್ರೀಯ ವೈದ್ಯಕೀಯ ಪರಿಷತ್ತು ನೀಡುವ ಸೂಚನೆಗಳೊಂದಿಗೆ ಪರಿಹಾರ ನೀಡುವಲ್ಲಿ ನಿಯಮಾನುಸಾರ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು. |

No: MED 38 RGU 2022

(ಡಾ.ಕೆ.ಸುಧಾಕರ್)

ವೈದ್ಯಕೀಯ ಶಿಕ್ಷಣ ಹಾಗೂ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಇಲಾಖಾ ಸಚಿವರು